ಹಿಂದುಳಿದ ವರ್ಗ ಮತ್ತು ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸುವ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

36 (121) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಉನ್ನತ ಶಿಕ್ಷಣ ಪಡೆಯುತ್ತಿರುವ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಗಳ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ನೀಡುವ ಯೋಜನೆಯಂತೆ ಇತರೆ ಹಿಂದುಳಿದ ವರ್ಗಗಳ ಮತ್ತು ಸಾಮಾನ್ಯ ವರ್ಗದ ಕಡು ಬಡ ವಿದ್ಯಾರ್ಥಿಗಳನ್ನು ಗುರುತಿಸಿ ಅವರಿಗೂ ಇಂತಹ ಯೋಜನೆ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ, ಅಂತಹ ಕಾರ್ಯಕ್ರಮಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಉನ್ನತ ಶಿಕ್ಷಣ ಪಡೆಯುತ್ತಿರುವ ಕೆಲವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳು ಸರ್ಕಾರ ವಿತರಿಸಿದ ಲ್ಯಾಪ್‌ಟಾಪ್‌ಗಳನ್ನು ಇತರರಿಗೆ ಕಡಿಮೆ ದರದಲ್ಲಿ ಮಾರಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು?